ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 12 ಪ್ರಧಾನ ಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯ ವಾಣಿ ದಿನಾಂಕ : DATE : 11/2/21

# ನರೇಂದ್ರ ಮೋದಿ ಶಾರ್ಪ್ ಮ್ಯಾನ್

11/2/21

## ಪ್ರಧಾನಿ ಬಗ್ಗೆ ದೇವೇಗೌಡರ ಮೆಚ್ಚುಗೆ

ರಾಯಚೂರು: ಪ್ರಧಾನಿ ನರೇಂದ್ರ ಮೋದಿ ಇಂಟಲಿಜೆಂಟ್, ಶಾರ್ಪ್ ಮ್ಯಾನ್ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಬಣ್ಣಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 'ನಾನು ನಡೆದು ಬಂದ ಹಾದಿ, ಹಿನ್ನೆಲೆ, ನನ್ನ ವ್ಯಕ್ತಿತ್ವವನ್ನು ತಿಳಿದುಕೊಂಡೇ ಅವರು ನನ್ನ ಬಗ್ಗೆ ಮಾತನಾಡಿದ್ದಾರೆ. ಅವರಿಗೆ ನನ್ನ ಬಗ್ಗೆ ಚೆನ್ನಾಗಿ ಗೊತ್ತಿದೆ. ಸದನದಲ್ಲಿ ರೈತರ ಹೋರಾಟದ ಕುರಿತು ತುಂಬಾ ಸೊಗಸಾಗಿ ಮಾತನಾಡಿದರು. ಆದರೆ, ಹೋರಾಟವನ್ನು ಹೇಗೆ ಅಂತ್ಯಗೊಳಿಸಬೇಕು ಎಂಬುದನ್ನೇ ಹೇಳಲಿಲ್ಲ. ದೆಹಲಿ ರೈತರ ಹೋರಾಟ ಪ್ರತಿಷ್ಠೆಯಾಗಿ ಪರಿಗಣಿಸಬಾರದು. ರೈತರಿಗೆ ತಮ್ಮ ನೋವು ಹೇಳಿಕೊಳ್ಳುವ ಸ್ವಾತಂತ್ರ್ಯ ಇರುತ್ತದೆ. ಲೋಕಸಭೆಯಲ್ಲಿ ಬಹುಮತ ಇದೆ ಎಂಬ ಕಾರಣಕ್ಕೆ ಕೃಷಿ ಮಸೂದೆಗಳು ಪಾಸ್ ಆದವು. ಆದರೆ, ಮರುದಿನವೇ ರಾಜ್ಯಸಭೆಯಲ್ಲಿ ಮಂಡಿಸುವ ಅನಿವಾರ್ಯತೆ ಇರಲಿಲ್ಲ. ರಾಜ್ಯಸಭೆಯಲ್ಲಿ ಬಹುಮತ ಇರಲಿಲ್ಲ. ಮಸೂದೆ ಅಧ್ಯಯನಕ್ಕೆ ಕಾಲಾವಕಾಶ ನೀಡಬೇಕಿತ್ತು. ಜನರ ಅಭಿಪ್ರಾಯ ಸಂಗ್ರಹಿಸುವಂತೆ ತಿಳಿಸಿದ್ದೆ ಎಂದರು.



**ರಾಜ್ಯದಲ್ಲಿ ನಡೆಯುತ್ತಿರುವ ಉಪಚುನಾವಣೆಗಳಿಗೆ ಪಕ್ಷ ಸ್ಪರ್ಧಿಸುವುದಿಲ್ಲ ಎಂದು ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಅವರ ಹೇಳಿಕೆ ಸಮಂಜಸವಾಗಿದೆ. ಈಗ ನಮ್ಮ ಬಳಿ ಚುನಾವಣೆ ಎದುರಿಸಲು ಹಣ ಇಲ್ಲ.**

**• ಎಚ್.ಡಿ. ದೇವೇಗೌಡ,**
**ಜೆಡಿಎಸ್ ರಾಷ್ಟ್ರಾಧ್ಯಕ್ಷ**

ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ನಾವು ಮುಂದಾಗುವುದಿಲ್ಲ. ಮುಂದಿನ ಎರಡೂವರೆ ವರ್ಷ ಯಡಿಯೂರಪ್ಪನವರೇ ಸಿಎಂ ಆಗಿರಲಿ. ಜೆಡಿಎಸ್ ವಿಲೀನದ ಬಗ್ಗೆ ಕೇಳಿ ಬರುತ್ತಿರುವ ಹೇಳಿಕೆಗಳು ಸರಿಯಲ್ಲ. ಇಂಥ ಸಂಗತಿ ಮನರಂಜನೆ ವಿಚಾರ ಆಗದಿರಲಿ ಎಂದು ಸೂಚನೆ ನೀಡಿದ್ದೇನೆ ಎಂದರು ಮಾಜಿ ಪ್ರಧಾನಿ.